# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 917 (942)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿಯ ಪ್ರಗತಿಯ ಕುರಿತು

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಿಮಾನ ನಿಲ್ದಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಅವುಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ವಿಜಯಪುರದಲ್ಲಿ ನಿರ್ಮಾಣವಾಗುತ್ತಿರುವ ವಿಮಾನ ನಿಲ್ದಾಣ ಕಾಮಗಾರಿಗೆ ಅನುದಾನದ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗಿದೆಯೇ ; ಯಾವ ಕಾಲಮಿತಿಗೆ ಒಳಪಟ್ಟು ಅಂತಿಮ ಯೋಜನಾ ವರದಿಯನ್ನು ತಯಾರಿಸಲಾಗುವುದು ;

(ಈ) ಎ.ಟಿ.ಆರ್-72 ಮಾದರಿಯ ಅಥವಾ ಅದಕ್ಕೆ ಸಮನಾದ ವಿಮಾನಗಳ ಕಾರ್ಯಾಚರಣೆಗೆ ಅನುಕೂಲವಾಗುವಂತೆ ವಿಜಯಪುರ ವಿಮಾನನಿಲ್ದಾಣವನ್ನು ಅಭಿವೃದ್ಧಿಪಡಿಸಲಾಗುವುದೇ;

(ಉ) ಸದರಿ ಕಾಮಗಾರಿಗೆ ಬೇಕಾಗುವ ಅಗತ್ಯ ವೆಚ್ಚವನ್ನು ಅಂದಾಜಿಸಲಾಗಿದೆಯೇ ;

(ಊ) ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ಮತ್ತು ಶೀಘ್ರವಾಗಿ ಕಾಮಗಾರಿ ಪ್ರಾರಂಭಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?